# ವಿದ್ಯಾರ್ಥಿ ವೇದಿಕೆ ಉದ್ಘಾಟನೆ, ಪ್ರತಿಭಾ ಪುರಸ್ಕಾರ

**ವಿಕ ಸುದ್ದಿಲೋಕ** ಕಾರ್ಕಳ

ಸ್ಥಳೀಯ ಮಂಜುನಾಥ ಪೈ ಸ್ಮಾರಕ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಸಕ್ತ ಸಾಲಿನ ವಿದ್ಯಾರ್ಥಿ ವೇದಿಕೆ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಶುಕ್ರವಾರ ನಡೆಯಿತು.

ಮಣಿಪಾಲ ಇನ್ನರ್‌ಲೈಟ್ ವೆಲ್‌ನೆಸ್ ಸೆಂಟರ್‌ನ ಹಿಪ್ನೋಥೆರೆಪಿಸ್ಟ್, ಕವಯಿತ್ರಿ ಜ್ಯೋತಿ ಮಹದೇವ ಉದ್ಘಾಟಿಸಿ, ವಿದ್ಯಾರ್ಥಿಗಳು ಪದವಿ ಜೀವನದಲ್ಲಿ ಭವಿಷ್ಯದ ಬಗ್ಗೆ ಗುರಿಯಿರಿಸಿ ತಮ್ಮ ವೈಬ್ರೆಂಟ್ ಎನರ್ಜಿ ಉಪಯೋಗಿಸಿದರೆ ಸಾರ್ಥಕವಾಗುತ್ತದೆ. ಮುಂದೆ ಗುರಿ, ಹಿಂದೆ ಗುರು ಇದ್ದಾಗ ಸಾಧನೆ ಸಾಧ್ಯ. ವಿದ್ಯಾರ್ಥಿಗಳಿಗೆ ಈ ಪ್ರಾಯದಲ್ಲಿ ನಾನಾ ರೀತಿಯಲ್ಲಿ ಬೇರೆ ಬೇರೆ ಕಡೆಗೆ ಗಮನ ಹರಿಯುತ್ತದೆ. ಆದರೆ ಸ್ಪಷ್ಟ ಗುರಿಯಿದ್ದು ಸಿಗುವ ಅವಕಾಶಗಳನ್ನು ಬಳಸಿಕೊಳ್ಳಬೇಕು. ಖಿನ್ನತೆಗೊಳಗಾಗದೆ, ಜೀವನದಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು. ಜೀವನವನ್ನು ಸಕಾರಾತ್ಮಕವಾಗಿ ನೋಡುವ ದೃಷ್ಟಿಕೋನ ಬೆಳೆಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿ ಕಾರ್ಕಳ ಉಪ ವಿಭಾಗದ ಸಹಾಯಕ ಪೊಲೀಸ್ ಅಧೀಕ್ಷಕ ಪಿ. ಕೃಷ್ಣಕಾಂತ್ ಮಾತನಾಡಿ, ನಾನಾ ಕ್ಷೇತ್ರಗಳಲ್ಲಿ ನಾನು ಕೆಲಸ ಮಾಡಿ ಪೊಲೀಸ್ ವಿಭಾಗ ಸೇರಿದ್ದೇನೆ. ವಿದ್ಯಾರ್ಥಿಗಳಿಗೆ ತುಂಬಾ



ಕಾರ್ಕಳ ಮಂಜುನಾಥ ಪೈ ಸ್ಮಾರಕ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಸಕ್ತ ಸಾಲಿನ ವಿದ್ಯಾರ್ಥಿ ವೇದಿಕೆ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಮಣಿಪಾಲ ಇನ್ನರ್‌ಲೈಟ್ ವೆಲ್‌ನೆಸ್ ಸೆಂಟರ್‌ನ ಹಿಪ್ನೋಥೆರೆಪಿಸ್ಟ್ ಹಾಗೂ ಕವಯಿತ್ರಿ ಜ್ಯೋತಿ ಮಹದೇವ ಉದ್ಘಾಟಿಸಿದರು.

ಅವಕಾಶ ಸಿಗುತಿದ್ದು, ಸರಿಯಾಗಿ ಬಳಸಿಕೊಳ್ಳಬೇಕು. ಡ್ರಗ್ಸ್, ಸಿಗರೇಟು, ಕುಡಿತದ ದುಶ್ಚಟಗಳಿಗೆ ಬಲಿಯಾಗದಿರಿ. ಅಂತದ್ದು ಏನಾದರೂ ಕಂಡು ಬಂದಲ್ಲಿ ಪೊಲೀಸರಿಗೆ ಮಾಹಿತಿ ನೀಡಿ. ಯುವಜನತೆಯನ್ನು ದೇಶದ ಆಸ್ತಿಯನ್ನಾಗಿ ರೂಪಿಸಬೇಕೇ ಹೊರತು ದುಷ್ಟಶಕ್ತಿಯಾಗಿ ಅಲ್ಲ. ವಿದ್ಯಾರ್ಥಿಗಳಿಗೆ ಸುಲಭವಾಗಿ ಸಿಗುವ ಮೊಬೈಲ್ ಬಳಕೆ ಮನೆಯಲ್ಲಿ ಪೋಷಕರು ಗಮನಿಸಬೇಕು. ಶೈಕ್ಷಣಿಕ ವೀಡಿಯೊ ಮಾಹಿತಿ ಮಾತ್ರ ನೋಡಬೇಕು, ಸಾಮಾಜಿಕ ನೆಟ್‌ವರ್ಕ್‌ಗಳಲ್ಲಿ ಸಮಯ ವ್ಯಯಿಸಿ, ಜೀವನ ಹಾಳು ಮಾಡಬೇಡಿ. ಪೋಷಕರು ಮಕ್ಕಳನ್ನು ಗಮನಿಸಿ ಸೂಕ್ತ ಸಲಹೆ ನೀಡಬೇಕು ಎಂದರು.

ಪ್ರಿನ್ಸಿಪಾಲ್ ಪ್ರೊ.ಶ್ರೀವರ್ಮ ಅಜ್ರಿ ಎಂ. ಅಧ್ಯಕ್ಷತೆ ವಹಿಸಿದ್ದರು. ನಾನಾ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು. ಶೈಕ್ಷಣಿಕವಾಗಿ ಹಾಗೂ ಕ್ರೀಡಾ ವಿಭಾಗದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಹಾಗೂ ಇತ್ತೀಚೆಗೆ ಸಿ.ಎ. ಪರೀಕ್ಷೆಯಲ್ಲಿ ಉತ್ತೀರ್ಣರಾದ ಕಾಲೇಜಿನ ಪೂರ್ವ ವಿದ್ಯಾರ್ಥಿ ಸಚಿನ್ ರಾಜ್ ಅವರನ್ನು ಅಭಿನಂದಿಸಲಾಯಿತು. ವಿದ್ಯಾರ್ಥಿ ವೇದಿಕೆ ನಾಯಕ ವೆನ್ಜಿಲ್ ಅಗೇರಾ ಸ್ವಾಗತಿಸಿದರು. ವಿದ್ಯಾರ್ಥಿ ಕ್ಷೇಮಪಾಲನಾಕಾರಿ ಯೋಗೇಶ್ ಡಿ.ಎಚ್. ವಿದ್ಯಾರ್ಥಿ ನಾಯಕರಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ಉಪನ್ಯಾಸಕಿ ಜ್ಯೋತಿ ಎಲ್. ಜನ್ನೆ ಶೈಕ್ಷಣಿಕ ಪುರಸ್ಕಾರ ಕಾರ್ಯಕ್ರಮ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕ ಕೃಷ್ಣಮೂರ್ತಿ ವೈದ್ಯ ಕ್ರೀಡಾ ವಿಭಾಗದ ಪುರಸ್ಕಾರ ಕಾರ್ಯಕ್ರಮ ನಿರೂಪಿಸಿದರು. ಅಂತಿಮ ಬಿ.ಕಾಂ. ನ ಶರಣ್ಯ ಹಾಗೂ ಮನಿಷ್ ನಿರೂಪಿಸಿದರು. ಶಬರಿ ವಂಧಿಸಿದರು.

ಪ್ರಕೃತಿ ಉಳಿಸಿ-ಬೆಳೆಸಿ ಎಂಬ ಧ್ಯೇಯದೊಂದಿಗೆ ನಡೆದ ಈ ಕಾರ್ಯಕ್ರಮದಲ್ಲಿ ಅತಿಥಿಗಳಿಗೆ ಸ್ಮರಣಿಕೆಯಾಗಿ ಗಿಡ ನೀಡಲಾಯಿತು. ಅತಿಥಿಗಳು ಸ್ಮರಣಿಕೆ ಪಡೆದ ಗಿಡಗಳನ್ನು ಕಾಲೇಜು ಆವರಣದಲ್ಲಿಯೇ ನೆಟ್ಟರು. ಮಧ್ಯಾಹ್ನ ವಿದ್ಯಾರ್ಥಿಗಳಿಂದ ಪ್ರತಿಭಾ ಪ್ರದರ್ಶನ ನಡೆಯಿತು.